CC.No.380/2010
CW-19 as PW-12

# ಮುಖ್ಯ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯದಲ್ಲಿ ಸ್ಥಳಃ ರಾಯಚೂರು.

## ಸಿಸಿ.ನಂಃ380/2010

ಚಾಸಾಃ–19

ಪ್ರಾಸಾಃ–12

| | | |
|---|---|---|
| ಹೆಸರು | ಃ | ರಾಘವೇಂದ್ರ |
| ತಂದೆ/ಗಂಡನ ಹೆಸರು | ಃ | ಬಸಲಿಂಗಪ್ಪ |
| ವಯಸ್ಸು | ಃ | 31 ವರ್ಷ |
| ಉದ್ಯೋಗ | ಃ | ಖಾಸಗಿ ಕೆಲಸ |
| ವಾಸಸ್ಥಳ | ಃ | ರಾಯಚೂರು |

*****

ದಿನಾಂಕಃ 23-08-2016 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆಃ** ಅಭಿಯೋಜನೆ ಪರ **ಹಿಸಸಅ** ರವರಿಂದಃ

ಈಗ ನೋಡುತ್ತಿರುವ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಪಂಚನಾಮೆಯನ್ನು ಸಾಕ್ಷಿಯು ಗುರುತಿಸಿದ್ದರಿಂದ ಅದನ್ನು ನಿಪಿ_31 ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ_31(ಎ) ಮತ್ತು ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ಪಂಚನಾಮೆಗಳನ್ನು ಮಾಡಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತ ಮಾಡಿಲ್ಲ. ಪಂಚನಾಮೆಯಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ. ಈಗ್ಗೆ ಐದು ವರ್ಷದ ಪೋಲಿಸ್ ಠಾಣೆಯಲ್ಲಿ ಪೋಲಿಸರ ವಿನಂತಿಯ ಮೇರೆಗೆ ಸಹಿ ಮಾಡಿರುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಹಿ.ಸ.ಸ.ಅ. ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ವಿನಂತಿಸಿಕೊಂಡಿರುತ್ತಾರೆ–ಅನುಮತಿ ನೀಡಲಾಯಿತು)

**ಪಾಟೀಸವಾಲುಃ** ಹಿಸಸಅ ರವರಿಂದಃ

ದಿನಾಂಕಃ 23-07-2010 ರಂದು ಮದ್ಯಾಹ್ನ 01:00 ರಿಂದಾ 02ಃ00 ಘಂಟೆಯ ಸಮಯದಲ್ಲಿ ನನ್ನ ಮತ್ತು ಚಾಸಾ_20 ರವರ ಸಮಕ್ಷಮ 4ನೇ ಆರೋಪಿತ ತೋರಿಸಿ ಹಾಜರುಪಡಿಸಿದ ಮೇರೆಗೆ ಅವರ ಮನೆಯಲ್ಲಿ ಒಂದು ಕಪಾಟಿನಲ್ಲಿಟ್ಟಿದ್ದ 20 ಚೀಟಿ ಕಾರ್ಡಗಳನ್ನು ಪಂಚನಾವೆಯಲ್ಲಿ ನಮೂದಿಸಿದ ಕ್ರಮಸಂಖ್ಯೆಗಳಂತೆ ನಿಪಿ_31 ರಂತೆ ಮಾಡಿ ನಮ್ಮ ಸಮಕ್ಷಮ ಜಪ್ತ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ_20 ರವರ ಸಮಕ್ಷಮ ನಿಪಿ_31 ರಂತೆ ಪಂಚನಾಮೆಯನ್ನು ಮಾಡಿದ್ದರೂ ಸಹಿತ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ನನಗೆ ಗೊತ್ತು ಎಂದರೆ ಸರಿಯಲ್ಲ

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನೆ ಮೇರೆಗೆ ಬೆರಳಚ್ಚುಗಾರರು ಬೆರಳಚ್ಚು ಮಾಡಿರುತ್ತಾರೆ ಮತ್ತು ಅದನ್ನು ಸಾಕ್ಷಿಗೆ ಓದಿ ತಿಳಿಸಿ ಹೇಳಿದಾಗ ಸಾಕ್ಷಿ ಸರಿ ಇದೆ ಅಂತಾ ಒಪ್ಪಿಕೊಂಡಿರುತ್ತಾನೆ)

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ರಾಯಚೂರು.